**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1185 (1389)
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 16-03-2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಪಿಯು ಕಾಲೇಜುಗಳಲ್ಲಿ ಪ್ರಸ್ತುತ ಒಟ್ಟು ಎಷ್ಟು ಉಪನ್ಯಾಸಕ ಹುದ್ದೆಗಳು ಮಂಜೂರಾಗಿವೆ; ಈ ಪೈಕಿ ಎಷ್ಟು ಹುದ್ದೆಗಳು, ಖಾಲಿಯಾಗಿವೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಒಟ್ಟು 12,913 ಉಪನ್ಯಾಸಕರ ಹುದ್ದೆಗಳು ಮಂಜೂರಾಗಿದೆ. ಈ ಪೈಕಿ 5206 ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ; ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| (ಆ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ಮಾಹಿತಿ ಒದಗಿಸುವುದು) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 814 ವಿವಿಧ ವಿಷಯಗಳ ಉಪನ್ಯಾಸಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. |
| (ಇ) | ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಯಾವುದೇ ವೇಳಾಪಟ್ಟಿ ನಿಗಧಿಪಡಿಸಲಾಯಿತೇ; ಇದ್ದರೆ ಅದರ ವಿವರವೇನು; | ನೇರ ನೇಮಕಾತಿಯ ಕುರಿತು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ದಿನಾಂಕ: 15-10-2024 ರಂದು ತಿದ್ದುಪಡಿ ತಂದಿರುವ ಹಿನ್ನೆಲೆಯಲ್ಲಿ, ಉಪನ್ಯಾಸಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲು ಆಯ್ಕೆ ಪ್ರಾಧಿಕಾರವನ್ನು ನಿರ್ದಿಷ್ಟಪಡಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>ಬಡ್ತಿ ಕೋಟಾದ ಉಪನ್ಯಾಸಕರ ಹುದ್ದೆಗಳ ಪೈಕಿ 789 ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಅರ್ಹರಿರುವ ಪ್ರೌಢಶಾಲಾ ಸಹಶಿಕ್ಷಕರುಗಳಿಗೆ ಅರ್ಹತಾ ಪರೀಕ್ಷೆಯನ್ನು ನಿಗದಿಪಡಿಸಲಾಗಿದ್ದು ದಿನಾಂಕ: 21-04-2026 ರಿಂದ ದಿನಾಂಕ: 24-04-2026 ರವರೆಗೆ ಅರ್ಹತಾ ಪರೀಕ್ಷೆಯನ್ನು ನಡೆಸಿದ ನಂತರ ಬರುವ ಫಲಿತಾಂಶದಲ್ಲಿ ಅರ್ಹತೆ ಹೊಂದಿರುವ ಸಹಶಿಕ್ಷಕರುಗಳಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡಲು ಕ್ರಮವಹಿಸಲಾಗುವುದು. |

| | | |
|---|---|---|
| (ಈ) | ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಕ್ಕೆ ಧಕ್ಕೆಯಾಗದಂತೆ ತಾತ್ಕಾಲಿಕ ಉಪನ್ಯಾಸಕರ ನೇಮಕಕ್ಕೆ ಸರ್ಕಾರ ಯೋಜನೆ ರೂಪಿಸಿದೆಯೇ? (ಮಾಹಿತಿ ಒದಗಿಸುವುದು) | ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಎದುರಾಗಿ ಕಾರ್ಯಭಾರ ಕಡಿಮೆ ಇರುವ ಉಪನ್ಯಾಸಕರನ್ನು ನಿಯೋಜಿಸಲಾಗಿದೆ ಹಾಗೂ. ನಿಯೋಜನೆ ಮಾಡಲು ಸಾಧ್ಯವಾಗದ ಕಡೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಕ್ಕೆ ಧಕ್ಕೆಯಾಗದಂತೆ ಕ್ರಮಕೈಗೊಳ್ಳಲಾಗಿದೆ. |

ಸಂಖ್ಯೆ: ಇಪಿ 98 ಡಿಜಿಡಬ್ಲೂ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು